## ಕರ್ನಾಟಕ ವಿಧಾನ ಪರಿಷತ್

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 1361 |
| **ಸದಸ್ಯರ ಹೆಸರು** | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | 22.08.2025 |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆಯಲ್ಲಿ (ಕೆಆರ್ ಐಡಿಎಲ್) ಕೋಟ್ಯಾಂತರ ರೂ. ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td rowspan="3">I. ಕೆಆರ್‌ಐಡಿಎಲ್ ಸಂಸ್ಥೆಗೆ ವಿವಿಧ ಇಲಾಖೆಗಳಿಂದ ವಹಿಸಿದ ಕಾಮಗಾರಿಗಳನ್ನು ನೇರವಾಗಿ ಸಂಸ್ಥೆಯ ವತಿಯಿಂದಲೇ ನಿಯಮಾನುಸಾರ ಅನುಷ್ಠಾನಗೊಳಿಸಲಾಗುತ್ತಿದೆ. ಕಾಮಗಾರಿಗಳನ್ನು ಸಂಸ್ಥೆಯಲ್ಲಿ ನಿರ್ವಹಿಸಲು ನೋಂದಾಯಿತ ಗ್ರೂಪ್ ಲೀಡರ್‌ಗಳು ಹಾಗೂ ಸರಕು ಮತ್ತು ಸೇವೆಗಳ ಸರಬರಾಜುದಾರರಿಂದ ಸೇವೆಯನ್ನು ಪಡೆದು ಬಿಲ್ ಪಾವತಿಸುವುದು ಜಾರಿಯಲ್ಲಿದೆ. ಉಳಿದಂತೆ ಸಂಸ್ಥೆಯಲ್ಲಿ ಗುತ್ತಿಗೆದಾರರಿಗೆ ನೇರವಾಗಿ ಬಿಲ್ ಪಾವತಿಸುವುದಿಲ್ಲ.<br><br>II. ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆಯಲ್ಲಿ ಸ್ವೀಕೃತವಾಗುವ ದೂರುಗಳಿಗೆ ನಿಯಮಾನುಸಾರ ಕ್ರಮ ತೆಗೆದುಕೊಳ್ಳಲಾಗುತ್ತಿದೆ.<br><br>III. ಸಂಸ್ಥೆಯಲ್ಲಿ ಸ್ವೀಕೃತವಾಗುತ್ತಿರುವ ದೂರುಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು (ನಿವೃತ್ತ) ರವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಿ, ಆರೋಪಿತ ಅಧಿಕಾರಿಗಳ ಮೇಲೆ ಇಲಾಖಾ ವಿಚಾರಣಾ ವರದಿ ಬಂದ ನಂತರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.</td></tr>
<tr><td>ಆ.</td><td>ಕಾಮಗಾರಿ ಆದೇಶ ಇಲ್ಲದಿದ್ದರೂ ಅಧಿಕೃತವಾಗಿ ಅನುದಾನ ಬಿಡುಗಡೆಯಾಗದಿದ್ದರೂ ಸಿಸಿ ರಸ್ತೆ ಕಾಮಗಾರಿಗೆ ನಕಲಿ ದಾಖಲೆ ಸೃಷ್ಟಿಸಿ ಕೋಟ್ಯಾಂತರ ರೂಪಾಯಿಗಳನ್ನು ಗುತ್ತಿಗೆದಾರರ ಖಾತೆಗೆ ಜಮೆ ಮಾಡಿರುವುದು ನಿಜವೇ:</td></tr>
<tr><td>ಇ.</td><td>ನಿಜವಾದಲ್ಲಿ, ಈ ಸಂಬಂಧ ತನಿಖೆಗೆ ಆದೇಶಿಸಲಾಗಿದೆಯೇ; ಹಾಗೂ ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳಲಾಗುವುದೇ?</td></tr>
</table>

ಕಡತ ಸಂಖ್ಯೆ: ಗ್ರಾಅಪ/ಆರ್‌ಆರ್‌ಸಿ/ಕವಿಪ/156ನೇ/ಅ/2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು